ಆಧಾರದಲ್ಲಿ ಕೊಳವೆ ಬಾವಿ ಕೊರೆದು, ಪಂಪು ಮೋಟಾರು ಅಳವಡಿಸಿ, ವಿದ್ಯುದ್ದೀಕರಣಗೊಳಿಸಲು ಕ್ರಮ ಕೈಗೊಂಡಿದೆ.

521 ಶ್ರೀ ಶಿವಲಿಂಗೇಗೌಡ ಕೆ.ಎಂ. : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸ್ತ್ರೀಶಕ್ತಿ ಮತ್ತು ಸ್ವಸಹಾಯ ಸಂಘಗಳ ಮುಖಾಂತರ ಪೌಷ್ಟಿಕ ಆಹಾರವನ್ನು ತಯಾರಿಸಿ ಸರಬರಾಜು ಮಾಡುವ ಬಗ್ಗೆ ನ್ಯಾಯಾಲಯದಲ್ಲಿ ಆದೇಶ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು) :

ಅ) ಬಂದಿದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 7–10–2006ರ ಆದೇಶದಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಆಹಾರ ಸರಬರಾಜಿಗೆ ಗುತ್ತಿಗೆದಾರರನ್ನು ಬಳಸಬಾರದೆಂದು ಹಾಗೂ ಆಹಾರ ಸಾಮಗ್ರಿಗಳನ್ನು ಖರೀದಿಸಲು ಮತ್ತು ಸಿದ್ಧಪಡಿಸಲು ಗ್ರಾಮ ಸಮುದಾಯ, ಸ್ವಸಹಾಯ ಗುಂಪುಗಳು ಹಾಗೂ ಮಹಿಳಾ ಮಂಡಳಗಳನ್ನು ಬಳಸಿಕೊಳ್ಳ ಬೇಕೆಂದು ಆದೇಶಿಸಿರುತ್ತದೆ.

ಆ) ಅದರಂತೆ ರಾಜ್ಯದಲ್ಲಿ 176 ತಾಲ್ಲೂಕುಗಳನ್ನೊಳಗೊಂಡಂತೆ 137 ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲಾಗಿರುತ್ತದೆ. ಪ್ರತೀ ಘಟಕಗಳಲ್ಲಿ ಸ್ಥಳೀಯ ಹಾಗೂ ಸ್ವಸಹಾಯ ಗುಂಪುಗಳ 22–32 ಮಹಿಳೆಯರನ್ನು ಆಯ್ಕೆಮಾಡಲಾಗಿದೆ. ಇವರಿಗೆ ಆಹಾರ ತಯಾರಿಕೆ ಬಗ್ಗೆ ತರಬೇತಿ, ಯಂತ್ರೋಪಕರಣಗಳನ್ನು ಸಜ್ಜುಗೊಳಿಸು ವುದು, ಆಹಾರದ ಗುಣಮಟ್ಟವನ್ನು ಕಾಪಾಡುವ ಬಗ್ಗೆ ಹಾಗೂ ಆರ್ಥಿಕ ಸಹಾಯ ನೀಡಲು ಟೆಂಡರ್ ಮೂಲಕ ಬಲಸಂವರ್ಧಕರನ್ನು ಗುರುತಿಸಲಾಗಿ ರುತ್ತದೆ. ಸದರಿ ಬಲಸಂವರ್ಧಕರು ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಹಾಗೂ ತರಬೇತಿ ಘಕಟಗಳನ್ನು ಸ್ಥಾಪಿಸುವುದರೊಂದಿಗೆ ಆಹಾರ ತಯಾರಿಕೆ ಮತ್ತು ಗುಣಮಟ್ಟವನ್ನು ಕಾಪಾಡುವ ಬಗ್ಗೆ ತರಬೇತಿ ದಂಡಗಳನ್ವಯ ಗುಣಮಟ್ಟದ ಆಹಾರ ಪದಾರ್ಥಗಳನ್ನು ಸಿದ್ಧಪಡಿಸ ಲಾಗುತ್ತಿದೆ.

ಮಾನ್ಯ ಸುಪ್ರೀಂಕೋರ್ಟಿನ ಆದೇಶದಂತೆ ದಿನಾಂಕ: 01–08–09 ರಿಂದ ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಮತ್ತು ತರಬೇತಿ ಕೇಂದ್ರಗಳು ತಯಾರಿಸಿ ಸಿದ್ಧಪಡಿಸಿದ ಆಹಾರ ಪದಾರ್ಥಗಳನ್ನು ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾಗುತ್ತಿದೆ.

ಬೆಳಗಾವಿ ಜಿಲ್ಲೆಯಲ್ಲಿ ಡಿ.ದೇವರಾಜ ಅರಸು ಹಾಗೂ ಹಿಂದುಳಿದ ಅಭಿವೃದ್ಧಿ ನಿಗಮದ ವತಿಯಿಂದ ಕೊಳವೆ ಬಾವಿ ಮಂಜೂರಾತಿ :

529 ಶ್ರೀ ಜಾರಕಿಹೊಳಿ ಸತೀಶ್ ಲಕ್ಷ್ಮಣ ರಾವ್ (ಯಮಕನ ಮರಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಡಿ.ದೇವರಾಜು ಅರಸು ಅಭಿವೃದ್ಧಿ ನಿಗಮದ ವತಿಯಿಂದ ಕಳೆದ ಮೂರು ವರ್ಷಗಳಲ್ಲಿ ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗದ ಬಾವಿಗಳನ್ನು ಮಂಜೂರು ಮಾಡಲಾಗಿದೆ; (ಮತ ಕ್ಷೇತ್ರವಾರು ವಿವರ ನೀಡುವುದು);

ಆ) ಒಟ್ಟು ಮಂಜೂರು ಮಾಡಿದ ಕೊಳವೆ ಬಾವಿಗಳ ಪೈಕಿ ಇದುವರೆಗೂ ಎಷ್ಟು ಕೊಳವೆ ಬಾವಿಗಳನ್ನು ಕೊರಯಲಾಗಿದೆ;

ಇ) ಫಲಕಾರಿಯಾದ ಎಷ್ಟು ಕೊಳವೆ ಬಾವಿಗಳಿಗೆ ಪಂಪ್ ಸೆಟ್‌ಗಳನ್ನು ಅಳವಡಿಸಲಾಗಿದೆ ಹಾಗೂ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆಯೇ;

ಈ) ಈಗಾಗಲೇ ಕೊರೆಯಲಾದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸದೇ ವಿಳಂಬವಾಗಿರುವುದಕ್ಕೆ ಕಾರಣಗಳೇನು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮ–651 ಕೊಳವೆ ಬಾವಿಗಳು

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ–148 ಕೊಳವೆ ಬಾವಿಗಳು

ಮತಕ್ಷೇತ್ರವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮ–646 ಕೊಳವೆ ಬಾವಿಗಳು